ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ. ವೈ.ಎ. ನಾರಾಯಣಸ್ವಾಮಿ ಇವರು ನಿಯಮ 72 ರ ಅಡಿಯಲ್ಲಿ ಸಲ್ಲಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

**ಪ್ರಶ್ನೆ:**

ಕೋಲಾರ ಜಿಲ್ಲೆ, ಶ್ರೀನಿವಾಸಪುರ ತಾಲ್ಲೂಕು, ಗೌನಿಪಲ್ಲಿ ಹೋಬಳಿಯು ಅತೀ ದೊಡ್ಡ ಹೋಬಳಿ ಕೇಂದ್ರವಾಗಿದ್ದು, ಸುತ್ತಮುತ್ತಲಿನ ಹಲವಾರು ಪಂಚಾಯ್ತಿಗಳಲ್ಲಿನ ಬಡ, ದುರ್ಬಲ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳು ಉನ್ನತ ಶಿಕ್ಷಣದಿಂದ ವಂಚಿತರಾಗುತ್ತಿದ್ದು, ವಿಶೇಷವಾಗಿ ಹೆಣ್ಣುಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸುವ ಬಗ್ಗೆ;

**ಉತ್ತರ:**

ಕೋಲಾರ ಜಿಲ್ಲೆ ಶ್ರೀನಿವಾಸಪುರ ತಾಲ್ಲೂಕು, ಗೌನಿಪಲ್ಲಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸುವ ಸಂಬಂಧ ಯಾವುದೇ ಪ್ರಸ್ತಾವನೆ ಇಲಾಖೆಯಲ್ಲಿ ಸ್ವೀಕೃತಗೊಂಡಿರುವುದಿಲ್ಲ. ಪ್ರಸ್ತುತ ಗೌನಿಪಲ್ಲಿ ಕೇಂದ್ರ ಸ್ಥಳದಿಂದ 30 ಕಿ.ಮೀ. ಅಂತರದಲ್ಲಿ 01 ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಸೇರಿದಂತೆ 03 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, ಈ ಕಾಲೇಜುಗಳಲ್ಲಿ ಗೌನಿಪಲ್ಲಿ ಗ್ರಾಮ ಹಾಗೂ ಸುತ್ತಮುತ್ತಲಿನ ಗ್ರಾಮಗಳ ವಿದ್ಯಾರ್ಥಿಗಳು/ವಿದ್ಯಾರ್ಥಿನಿಯರು ವ್ಯಾಸಂಗ ಮಾಡಬಹುದಾಗಿರುವುದರಿಂದ ಯಾವುದೇ ವಿದ್ಯಾರ್ಥಿಗಳು ಉನ್ನತ ಶಿಕ್ಷಣದಿಂದ ವಂಚಿತರಾಗುವುದಿಲ್ಲ.

ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 03 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ವಿವರ

| ಕ್ರ. ಸಂ. | ಕಾಲೇಜಿನ ಹೆಸರು | ಅಂತರ | ವಿದ್ಯಾರ್ಥಿಗಳ ಸಂಖ್ಯೆ |
|---|---|---|---|
| 1 | ಸ.ಪ್ರ.ದ.ಕಾ. ಶ್ರೀನಿವಾಸಪುರ | 24 ಕಿ.ಮೀ | 796 |
| 2 | ಸ.ಪ್ರ.ದ.ಕಾ. ಚಿಂತಾಮಣಿ | 29 ಕಿ.ಮೀ | 1190 |
| 3 | ಸರ್ಕಾರಿ ಬಾಲಕಿಯರ ಕಾಲೇಜು, ಚಿಂತಾಮಣಿ | 29 ಕಿ.ಮೀ | 2227 |

ಪ್ರಸ್ತುತ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಅಸ್ತಿತ್ವದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ಬಲವರ್ಧನೆ ಮಾಡುವ ಉದ್ದೇಶವನ್ನು ಸರ್ಕಾರ ಹೊಂದಿದ್ದು, ನೂತನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸುವ ಉದ್ದೇಶ ಹೊಂದಿರುವುದಿಲ್ಲ.

ಸಂಖ್ಯೆ: ಇಡಿ 29 ಹೆಚ್‌ಪಿಸಿ 2022

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು